# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರವಾಸಿ ಟ್ಯಾಕ್ಸಿ ವಿತರಣೆ ಯೋಜನೆಯಡಿಯಲ್ಲಿ ನೀಡುವ ಸಹಾಯಧನವನ್ನು ಹೆಚ್ಚಳ ಮಾಡಲು ಮಂಜೂರಾತಿ.

ಓದಲಾಗಿದೆ: ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆರವರ ಪತ್ರ ಸಂಖ್ಯೆ: ಪ್ರಇ/ಯೋ-1/01/2017-18

ಕರ್ನಾಟಕ ಸರ್ಕಾರ ಪ್ರವಾಸೋದ್ಯಮ ಇಲಾಖೆ 153 22 APR 2017 ಸ್ವೀಕರಿಸಿದೆ

* * * *

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಪ್ರವಾಸೋದ್ಯಮ ನಿರ್ದೇಶಕರು ಬೆಂಗಳೂರುರವರು SCP/TSP ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಹಾಗೂ ಸಾಮಾನ್ಯ ಯೋಜನೆಯಡಿಯಲ್ಲಿ ಹಿಂದುಳಿದ ಹಾಗೂ ಅಲ್ಪಸಂಖ್ಯಾತ ವರ್ಗಗಳಿಗೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳು ಸ್ವ-ಉದ್ಯೋಗ ಕಲ್ಪಿಸಿಕೊಳ್ಳಲು ತಲಾ ರೂ.2.00 ಲಕ್ಷಗಳ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿಗಳನ್ನು 2016-17ನೇ ಸಾಲಿನವರೆಗೆ ವಿತರಿಸಲು ಕ್ರಮವಹಿಸಲಾಗಿದೆ ಎಂದು ತಿಳಿಸಿರುತ್ತಾರೆ.

2017-18ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿ ಪ್ರವಾಸೋದ್ಯಮ ಇಲಾಖೆಗೆ ರೂ.28.59 ಕೋಟಿಗಳನ್ನು ಒದಗಿಸಲಾಗಿದೆ.[ಪರಿಶಿಷ್ಟ ಜಾತಿ ಉಪಯೋಜನೆ ರೂ.20.18 ಕೋಟಿಗಳು, ಪರಿಶಿಷ್ಟ ಪಂಗಡ ಉಪಯೋಜನೆ ರೂ.8.41 ಕೋಟಿಗಳು]

ಸಮಾಜಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ, 2017-18ನೇ ಸಾಲಿನ ಮುಖ್ಯಮಂತ್ರಿಗಳ ಬಜೆಟ್ ಭಾಷಣದ ಕಂಡಿಕೆ-171ರಲ್ಲಿ ಕೆಳಗಿನಂತೆ ಘೋಷಿಸಲಾಗಿದೆ ಎಂದು ತಿಳಿಸಿರುತ್ತಾರೆ.

> "ವಾಹನಾ ಚಾಲನಾ ಪರವಾನಗಿ ಹೊಂದಿರುವ 3500 ಪರಿಶಿಷ್ಟ ಜಾತಿ ಮತ್ತು 1500 ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿಗಳನ್ನು ಖರೀದಿಸಲು 3 ಲಕ್ಷ ರೂ.ಗಳವರೆಗೆ ಅಥವಾ ವಾಹನದದ ಶೇ.50 ರಷ್ಟು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಸಹಾಯಧನ ನೀಡಲಾಗುವುದು. ಉಳಿದ ಮೊತ್ತವನ್ನು ಬ್ಯಾಂಕ್‌ಗಳಿಂದ ಸಾಲದ ರೂಪದಲ್ಲಿ ಪಡೆಯಬಹುದು"

JDP 21/4

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ SCP/TSP ಯೋಜನೆ ಹಾಗೂ ಸಾಮಾನ್ಯ ಯೋಜನೆಯಡಿಯಲ್ಲಿ ಪ್ರವಾಸೋದ್ಯಮ ಇಲಾಖೆಯಲ್ಲಿ ವಿತರಿಸುತ್ತಿರುವ ಪ್ರವಾಸಿ ಟ್ಯಾಕ್ಸಿಗಳ ಸಹಾಯಧನವನ್ನು ರೂ.2.00 ಲಕ್ಷಗಳಿಂದ ರೂ.3.00 ಲಕ್ಷಗಳಿಗೆ ಹೆಚ್ಚಳ ಮಾಡಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

21/4

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಪ್ರಇ 188 ಪ್ರವಾಯೋ 2017 ದಿನಾಂಕ:20-4-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2017-18ನೇ ಸಾಲಿನಿಂದ SCP/TSP ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಹಾಗೂ

...2

ಸಾಮಾನ್ಯ ಯೋಜನೆಯಡಿಯಲ್ಲಿ ಹಿಂದುಳಿದ ಹಾಗೂ ಅಲ್ಪಸಂಖ್ಯಾತ ವರ್ಗಗಳಿಗೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳು ಸ್ವ-ಉದ್ಯೋಗ ಕಲ್ಪಿಸಿಕೊಳ್ಳುವ ಸಲುವಾಗಿ ರೂ.3.00 ಲಕ್ಷ[ರೂಪಾಯಿ ಮೂರು ಲಕ್ಷಗಳು ಮಾತ್ರ]ಗಳ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಸದರಿ ವೆಚ್ಚಕ್ಕೆ ತಗಲುವ ವೆಚ್ಚವನ್ನು 2017-18ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆದೇಶ ಸಂಖ್ಯೆ ಎಫ್.ಡಿ. 03 ಟಿ.ಎಫ್.ಪಿ.2016 ದಿ:2-4-2016ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಕೆ. ರವಿಮೂರ್ತಿ) 20.4.1
ಸರ್ಕಾರದ ಅಪರ ಕಾರ್ಯದರ್ಶಿ
ಪ್ರವಾಸೋದ್ಯಮ ಇಲಾಖೆ

ಇವರಿಗೆ:

1. ಮಹಾಲೇಖಪಾಲರು(ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್ ವೃತ್ತ, ಬೆಂಗಳೂರು-1
4. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:
1) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರ ಆಪ್ತಕಾರ್ಯದರ್ಶಿ.
2) ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ. ಇವರಿಗೆ - ಮಾಹಿತಿ ಗಾಗಿ